# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 67 |
| ಸದಸ್ಯರ ಹೆಸರು | : | ಡಾ. ಧನಂಜಯ ಸರ್ಜಿ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಎಷ್ಟು; ಎಷ್ಟು ಶಾಲೆಗಳಲ್ಲಿ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲಾಗಿದೆ;</td><td><table><tr><td>ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ</td><td>41905</td></tr><tr><td>ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ</td><td>4850</td></tr><tr><td>ಒಟ್ಟು</td><td>46775</td></tr></table>ಪ್ರಸ್ತುತ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಸೌಲಭ್ಯವಿರುತ್ತದೆ.</td></tr>
<tr><td>ಆ)</td><td>ಶಾಲೆಗಳ ಶೌಚಾಲಯಗಳ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಒಂದು ಶೌಚಾಲಯ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ವಾರ್ಷಿಕ ಅನುದಾನ ಎಷ್ಟು;</td><td>ಸಮಗ್ರ ಶಿಕ್ಷಣ ಕರ್ನಾಟಕ:<br>ಸಮಗ್ರ ಶಿಕ್ಷಣ ಕರ್ನಾಟಕ ವತಿಯಿಂದ ಸರ್ಕಾರಿ ಶಾಲೆಗಳ ನಿರ್ವಹಣೆಗೆ ಮಕ್ಕಳ ದಾಖಲಾತಿಗೆ ಅನುಗುಣವಾಗಿ ರೂ.10,000 ಗಳಿಂದ 1,00,000 ವರೆಗೆ ಘಟಕ ವೆಚ್ಚ ನಿಗದಿಪಡಿಸಲಾಗಿದೆ ಅನುದಾನದ ಲಭ್ಯತೆಗನುಗುಣವಾಗಿ ಪ್ರತಿ ವರ್ಷ ಶಾಲಾನುದಾನ ಬಿಡುಗಡೆಗೊಳಿಸಲಾಗುವುದು.<br>ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ:<br>2024–25ನೇ ಸಾಲಿಗೆ ರಾಜ್ಯವಲಯ ಯೋಜನೆಯಡಿ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆ ಮತ್ತು ಇತರೇ ನಿರ್ವಹಣೆಗಾಗಿ ಮಕ್ಕಳ ದಾಖಲಾತಿ ಸಂಖ್ಯೆಗನುಗುಣವಾಗಿ ರೂ.9250/–ಗಳಿಂದ ರೂ.22500/–ಗಳ ಘಟಕ ವೆಚ್ಚವನ್ನು ಮಂಜೂರು ಮಾಡಲಾಗಿದೆ. ಈವರೆಗೆ ತ್ರೈಮಾಸಿಕವಾರು ಸರ್ಕಾರದಿಂದ ಅನುದಾನ ಬಿಡುಗಡೆ ಆಧಾರದಲ್ಲಿ ರೂ.4420.09 ಲಕ್ಷಗಳ ಅನುದಾನವನ್ನು ರಾಜ್ಯದ ಎಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬಿಡುಗಡೆ ಮಾಡಿ ಕ್ರಮವಹಿಸಲಾಗಿದೆ.</td></tr>
<tr><td>ಇ)</td><td>ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡದೆ ಮಕ್ಕಳಿಗೆ ಆರೋಗ್ಯ ಹಾಗೂ ಇನ್ನಿತರ ತೊಂದರೆಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಶೌಚಾಲಯಗಳಲ್ಲಿ ಶುಚಿತ್ವ ಕಾಪಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?</td><td>ಇಲ್ಲ.<br>ಪ್ರತಿ ವರ್ಷ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆ ಮತ್ತು ಇತರೇ ನಿರ್ವಹಣೆಗಾಗಿ ಸರ್ಕಾರದಿಂದ ಅನುದಾನ ಒದಗಿಸಲಾಗುತ್ತಿದೆ. ಅಲ್ಲದೇ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗಳ ಸಹಕಾರದೊಂದಿಗೆ ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಶೌಚಾಲಯ ಸ್ವಚ್ಛತಾ ಕಾರ್ಯ ಕೈಗೊಳ್ಳಲು ತಿಳಿಸಲಾಗಿದೆ.</td></tr>
</table>

ಇಪಿ: 325 ಯೋಸಕ 2024

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು